**(ಸಾಕ್ಷಿಯ ವಿಚಾರಣೆಯನ್ನು ವೀಡಿಯೋ ಕಾನ್ಫರೆನ್ಸ್ ಮುಖಾಂತರ ತೆಗೆದುಕೊಳ್ಳಲಾಯಿತು.)**

**ಸಾಕ್ಷಿಗೆ ದಿನಾಂಕ:17-02-2026 ರಂದು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು**

**ಪಾಟೀ ಸವಾಲು :: ಆರೋಪಿತರ ಪರ ಶ್ರೀ. TCM ವಕೀಲರಿಂದ ::**

ನಾನು ದಾಳಿ ಮಾಡಿರುತ್ತೇನೆ ಎಂದು ಹೇಳುತ್ತಿರುದನ್ನು ನಮ್ಮ ಠಾಣಾ ದಿನಚರಿಯಲ್ಲಿ ನಮೂದು ಮಾಡಿರುತ್ತೇನೆ. ಅದನ್ನು ಈ ಪ್ರಕರಣದಲ್ಲಿ ಹಾಜರುಪಡಿಸಿರುವುದಿಲ್ಲ. ನಾನು ವಶಪಡಿಸಿಕೊಂಡಿರುತ್ತೇನೆ ಎಂದು ಹೇಳುತ್ತಿರುವ ನಂಬರ್ ಪ್ಲೇಟ್ ಇಲ್ಲದ ವಾಹನವು ಯಾರಿಗೆ ಸೇರಿರುತ್ತದೆ ಎಂದು ನಾನು ತನಿಖೆ ಮಾಡಿರುವುದಿಲ್ಲ, ಅದನ್ನು ತನಿಖಾಧಿಕಾರಿಗಳು ಮಾಡಿರುತ್ತಾರೆ. ಸದರಿ ಬೈಕ್ ಯಾರಿಗೆ ಸೇರಿರುತ್ತದೆ ಎನ್ನುವ ಬಗ್ಗೆ ತನಿಖೆ ನಡೆಸಲು ನನಗೆ ಯಾವುದೇ ಸಮಸ್ಯೆ ಇಲ್ಲ ಎಂದರೆ ಸಾಕ್ಷಿಯು ಅದರ ಬಗ್ಗೆ ತನಿಖಾಧಿಕಾರಿಗಳು ತನಿಖೆ ಮಾಡಿರುತ್ತಾರೆ. ನಾನು ಮಾಡಿರುವ ಮಹಜರ್ ಗೆ ಅದರ ಪೂರ್ವದಲ್ಲಿ ಪಂಚರಿಗೆ ಯಾವುದೇ ನೋಟೀಸ್ ನೀಡಿರುವುದಿಲ್ಲ. ನಾನು ಯಾವುದೇ ಮಹಜರ್ ಮಾಡದ ಕಾರಣ ಆ ರೀತಿ ಪಂಚರಿಗೆ ನೋಟೀಸ್ ನೀಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಹೇಳುವಂತೆ ಯಾವುದೇ ವಾಹನವನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಪಂಚರನ್ನು ಸಹ ನಾನೇ ಸೃಷ್ಟಿಸಿ ಸುಳ್ಳು ಮಹಜರ್ ಅನ್ನು ತಯಾರಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಹೇಳುವಂತೆ ಆರೋಪಿಗಳಿಂದ ಯಾವುದೇ ಸ್ವ ಇಚ್ಚಾ ಹೇಳಿಕೆ ಪಡೆದಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿಗಳು ಯಾವುದೇ ತಪ್ಪು ಮಾಡದೇ ಇದ್ದರೂ ಸಹ ಆರೋಪಿತರನ್ನು ಈ ಪ್ರಕರಣದಲ್ಲಿ ಸೇರಿಸಿರುತ್ತೀರಾ ಎಂದರೆ ಸರಿಯಲ್ಲ. ಮೇಲಾಧಿಕಾರಿಗಳ ಒತ್ತಡಕ್ಕೆ ಮಣಿದು ಆರೋಪಿತರ ವಿರುದ್ದ ಸುಳ್ಳು ಪ್ರಕರಣವನ್ನು ಹೂಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿತರಿಗೂ ಹಾಗೂ ಪ್ರಕರಣಕ್ಕೂ ಹಾಗೂ ಮುದ್ದೆಮಾಲಿಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

Prl. C.J. & J.M.F.C, Tarikere. CC No.720/2014
PW-10

**:: ಮರುವಿಚಾರಣೆ ಇಲ್ಲ ::**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ.

sd/-
ಪ್ರಧಾನ ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.,
ತರೀಕೆರೆ.

ಸಾಕ್ಷಿಯ ಸಹಿ::